## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 48 (414) |
| ಸದಸ್ಯರ ಹೆಸರು | ಶ್ರೀ ಚಿದಾನಂದ್ ಎಂ ಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19-02-2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | 2021 ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ; | ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇದ್ದ ಒಟ್ಟು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದ್ದು, ಅದರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಂದು ಜಾರಿಯಲ್ಲಿದ್ದ ಸರ್ಕಾರದ ನೇಮಕಾತಿ ಹಾಗೂ ಮೀಸಲಾತಿ ನಿಯಮಗಳನ್ವಯ ದಿನಾಂಕ:30.09.2021 ರಂದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ಅಧಿಸೂಚನೆಯನ್ನು ಪ್ರಕಟಿಸಲಾಗಿತ್ತು.<br><br>ಅದರಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 3 ಹೈಕಕೋ 2018 ದಿನಾಂಕ:06.06.2020 ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಪಾಲಿಸಬೇಕಾದ ವಿಧಿವಿಧಾನಗಳ ಬಗ್ಗೆ ತಿಳಿಸಲಾಗಿರುತ್ತದೆ. ಸದರಿ ಸುತ್ತೋಲೆಯಲ್ಲಿ ಒಂದೇ ಅಧಿಸೂಚನೆ ಮೂಲಕ ಸ್ಥಳಿಯ ಮತ್ತು ಮಿಕ್ಕುಳಿದ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಹೊರಡಿಸುವ ನೇಮಕಾತಿ ಅಧಿಸೂಚನೆಯಲ್ಲಿ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಸದರಿ ಅಧಿಸೂಚನೆಯಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದೆಂದು ತಿಳಿಸಲಾಗಿದೆ.<br><br>1. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>2. ಒಂದು ವೇಳೆ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ, ಮಿಕ್ಕುಳಿದ ವೃಂದದ ಹುದ್ದೆಯನ್ನು ಆಯ್ಕೆಮಾಡಿಕೊಂಡು ನೇಮಕಾತಿ ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನಸೇವಾ ಅವಧಿಯಲ್ಲಿ ಅನುಚ್ಛೇದ 371ಜೆ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲವೆಂದು ಸ್ಪಷ್ಟೀಕರಿಸಲಾಗಿದೆ.<br><br>ಈ ಮೇಲ್ಕಂಡ ಸಿಆಸುಇ ಸುತ್ತೋಲೆ ದಿನಾಂಕ06.06.2020 ರಲ್ಲಿ ತಿಳಿಸಿರುವ ಅಂಶಗಳ ಮೇರೆಗೆ ಅದರಂತೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ದಿನಾಂಕ:30.09.2021 ರಂದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು.<br><br>ಮುಂದುವರೆದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ದಿನಾಂಕ:15.06.2022 ರಂದು ಮತ್ತೊಂದು ಸುತ್ತೋಲೆಯನ್ನು |

| | | |
|---|---|---|
| | | ಹೊರಡಿಸಿ ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ನೇಮಕಾತಿಗೆ ಸಂಬಂಧಿಸಿದಂತೆ ಈಗಾಗಲೇ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನು ಹೊರತುಪಡಿಸಿ ಒಂದೇ ಅಧಿಸೂಚನೆ ಹೊರಡಿಸಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಪ್ರಕರಣಗಳಿಗೆ ಸೀಮಿತವಾಗುವಂತೆ ಮಾತ್ರ ದಿನಾಂಕ:06.06.2020ರ ಸುತ್ತೋಲೆಯಲ್ಲಿ ನೀಡಲಾಗಿರುವ ನಿರ್ದೇಶನಗಳನ್ವಯ ಆಯ್ಕೆ ಪ್ರಕ್ರಿಯೆಯನ್ನು ಅಂತಿಮಗೊಳಿಸುವಂತೆ ಸೂಚಿಸಲಾಗಿರುತ್ತದೆ.<br><br>ಮೇಲಿನಂತೆ ಸಿಆಸು ಇಲಾಖೆಯು ಹೊರಡಿಸಿರುವ ಸುತ್ತೋಲೆಗಳಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ:30.01.2023 ರಂದು ಪ್ರಕಟಿಸಲಾಗಿತ್ತು.<br><br>ತದನಂತರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/03/ಹೈಕಕೋ/2019, ದಿ:01.02.2023 ರಲ್ಲಿ ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ದಿನಾಂಕ:15.06.2022ರ ಸುತ್ತೋಲೆಯ ಕೊನೆಯ ಕಂಡಿಕೆಯನ್ನು ಮಾತ್ರ ಹಿಂಪಡೆಯಲಾಗಿದ್ದು, ಇನ್ನುಳಿದ ಎಲ್ಲಾ ಅಂಶಗಳು ಯಥಾವತ್ತಾಗಿ ಜಾರಿಯಲ್ಲಿರುತ್ತವೆ ಎಂದು ತಿಳಿಸಲಾಗಿದೆ.<br><br>ಮುಂದುವರೆದು, ಅದೇ ಸುತ್ತೋಲೆಯಲ್ಲಿ ಈ ಕೆಳಕಂಡಂತೆ ಕ್ರಮವಹಿಸುವಂತೆ ಸ್ಪಷ್ಟಪಡಿಸಲಾಗಿದೆ.<br><br>**"ವಿವಿಧ ನೇಮಕಾತಿ ಪ್ರಾಧಿಕಾರಗಳು ದಿನಾಂಕ:15.06.2022 ರ ಸುತ್ತೋಲೆಯು ಜಾರಿಗೆ ಬರುವುದಕ್ಕೆ ಮೊದಲು ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನು ಹೊರತುಪಡಿಸಿ, ಬೇರೆ ಎಲ್ಲಾ ಹುದ್ದೆಗಳ ನೇಮಕಾತಿಗಾಗಿ ದಿನಾಂಕ:06.06.2020ರ ಸುತ್ತೋಲೆಯನ್ವಯ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿ, ಅಂತಿಮ ಆಯ್ಕೆಪಟ್ಟಿ ಪ್ರಕಟಿಸದೇ ಇದ್ದಲ್ಲಿ, ಅಂತಹ ನೇಮಕಾತಿ ಪ್ರಕ್ರಿಯೆಗಳಿಗೆ ಸೀಮಿತವಾಗಿ ಮಾತ್ರ ಅರ್ಜಿ ಸಲ್ಲಿಸುವ ಸಮಯದಲ್ಲಿ ಸ್ಥಳೀಯ ಅಭ್ಯರ್ಥಿಗಳಿಂದ ಪಡೆಯಲಾಗಿರುವ ಆಯ್ಕೆಯನ್ನು ಪರಿಗಣಿಸದೇ, ಮೆರಿಟ್ ಪಟ್ಟಿಯಿಂದ ಆಯ್ಕೆ ಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ ಆಯ್ಕೆ ಪಟ್ಟಿ ತಯಾರಿಸುವುದು. ನಂತರ ಸ್ಥಳೀಯ ವೃಂದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಪರಿಗಣಿಸಿ ಆಯ್ಕೆಪಟ್ಟಿ ತಯಾರಿಸುವಂತೆ ಸೂಚಿಸಿದೆ."**<br><br>ಮೇಲಿನಂತೆ ಸರ್ಕಾರದ ದಿನಾಂಕ:01.02.2023 ರ ಸುತ್ತೋಲೆಯ ಹಿನ್ನಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪರಿಷ್ಕೃತ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ:17.02.2023 ರಂದು ಪ್ರಕಟಿಸಲಾಗಿತ್ತು. ತದನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:03.03.2023 ರಂದು 1208 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿರುತ್ತದೆ. |

ದಿನಾಂಕ:17.02.2023 ರಂದು ಪ್ರಕಟಿಸಲಾದ ಪರಿಷ್ಕೃತ ತಾತ್ಕಾಲಿಕ ಆಯ್ಕೆಪಟ್ಟಿಯಿಂದ ಹಾಗೂ ದಿನಾಂಕ:03.03.2023 ರಂದು ಪ್ರಕಟಿಸಲಾದ ಅಂತಿಮ ಆಯ್ಕೆಪಟ್ಟಿಯಿಂದ ಬಾಧಿತರಾದ ಮಿಕ್ಕುಳಿದ ವೃಂದದ 10 ಅಭ್ಯರ್ಥಿಗಳಾದ ಶ್ರೀ ಶ್ರೀನಿವಾಸ್ ಟಿ.ಇ. ಮತ್ತು ಮತ್ತಿತರರು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ:956-965/2023 ರಂದು ದಾಖಲಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:17.02.2023 ರಂದು ಪ್ರಕಟಿಸಲಾದ ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಹಾಗೂ ದಿನಾಂಕ:03.03.2023 ರಂದು ಪ್ರಕಟಿಸಲಾದ ಅಂತಿಮ ಆಯ್ಕೆಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ಹೊರತುಪಡಿಸಿರುವ ಕ್ರಮವನ್ನು ವಜಾಗೊಳಿಸಿ ಈ ಹಿಂದೆ ದಿನಾಂಕ:30.01.2023 ರಂದು ಪ್ರಕಟಿಸಿದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಅಂತಿಮಗೊಳಿಸುವಂತೆ ನಿರ್ದೇಶನ ಕೋರಿದ್ದರು.

ಮುಂದುವರೆದು, ಅರ್ಜಿ ಸಂಖ್ಯೆ:956-965/2023 ರಲ್ಲಿ ಕೋರಿರುವ ಪರಿಹಾರವನ್ನೇ ಆಯ್ಕೆಯಿಂದ ವಂಚಿತರಾದ ಇತರೆ 06 ಅಭ್ಯರ್ಥಿಗಳು ಸಹ ಮಾನ್ಯ ನ್ಯಾಯಮಂಡಳಿಯಲ್ಲಿ 04 ಅರ್ಜಿಗಳನ್ನು ದಾಖಲಿಸಿದ್ದರು. ಸದರಿ 05 ಅರ್ಜಿಗಳನ್ನು ಒಟ್ಟುಗೂಡಿಸಿ ಪರಿಶೀಲಿಸಿದ ಮಾನ್ಯ ಆಡಳಿತ ನ್ಯಾಯಮಂಡಳಿಯು ದಿನಾಂಕ:22.09.2023 ರಂದು ನೀಡಿದ ತೀರ್ಪಿನಲ್ಲಿ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸಿ ಅರ್ಜಿಗಳನ್ನು ವಜಾಗೊಳಿಸಿರುತ್ತದೆ.

ಈ ಹಿನ್ನೆಲೆಯಲ್ಲಿ, ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರದ ದಿನಾಂಕ:01.02.2023ರ ಸುತ್ತೋಲೆಯಲ್ಲಿ ನೀಡಿರುವ ಸೂಚನೆಯಂತೆ ಸಿದ್ಧಪಡಿಸಿದ ಅಂತಿಮ ಆಯ್ಕೆ ಪಟ್ಟಿಯನ್ನು ಎತ್ತಿ ಹಿಡಿದಿರುವ ಪ್ರಯುಕ್ತ ಆಯ್ಕೆಪಟ್ಟಿಯಿಂದ ಹೊರಗುಳಿದ 42 ಅಭ್ಯರ್ಥಿಗಳು ಅದರಲ್ಲಿಯೂ 16 ಅರ್ಜಿದಾರರುಗಳು ಮಾನ್ಯ ನ್ಯಾಯಮಂಡಳಿಯ ತೀರ್ಪಿನ ವಿರುದ್ಧ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸುವ ಮುಖಾಂತರ ಮೇಲ್ಮನವಿ ಸಲ್ಲಿಸುವ ಸಾಧ್ಯತೆಯ ಹಿನ್ನೆಲೆಯಲ್ಲಿ ಸರ್ಕಾರವು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಿನಾಂಕ:11.10.2023 ರಲ್ಲಿ ಕೇವಿಯಟ್ ಅರ್ಜಿಯನ್ನು ದಾಖಲಿಸಲಾಗಿತ್ತು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:03.03.2023 ರಂದು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿರುತ್ತದೆ. ಅದರಂತೆ, ಸದರಿ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 92 ಡಿಸಿಇ 2023, ದಿನಾಂಕ:03.11.2023 ರಲ್ಲಿ ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಆಯ್ಕೆಯಾದ 1208 ಅಭ್ಯರ್ಥಿಗಳ ಶೈಕ್ಷಣಿಕ ಹಾಗೂ ನೇಮಕಾತಿ ನಿಯಮಗಳಂತೆ ನೈಜತೆ ಪ್ರಮಾಣಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ದಿನಾಂಕ:06.11.2023 ರಲ್ಲಿ ಆಯುಕ್ತಾಲಯಕ್ಕೆ ಕೋರಲಾಗಿತ್ತು. ಅದರಂತೆ ಆಯ್ಕೆಯಾದ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಗೆ ಸಂಬಂಧಿಸಿದಂತೆ ಇಲಾಖಾ ಹಂತದಲ್ಲಿ ಸಮಿತಿಗಳನ್ನು ರಚಿಸಿ ಆ ಮೂಲಕ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನಾ ಪ್ರಕ್ರಿಯೆಯನ್ನು ಪ್ರಾರಂಭಿಸಲಾಯಿತು.

| | | |
|---|---|---|
| | | ಈ ಮಧ್ಯೆ ಶ್ರೀ ಟಿ.ಇ. ಶ್ರೀನಿವಾಸ್ ಹಾಗೂ ಇತರೆ 07 ಅರ್ಜಿದಾರರು ಸೇರಿದಂತೆ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ದಿನಾಂಕ:22-09-2023ರ ತೀರ್ಪನ್ನು ಪ್ರಶ್ನಿಸಿ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಿನಾಂಕ:14.02.2023 ರಂದು ರಿಟ್ ಅರ್ಜಿ ಸಂಖ್ಯೆ:28614/2023 ನ್ನು ದಾಖಲಿಸಿ, ಮಾನ್ಯ ಆಡಳಿತ ನ್ಯಾಯಮಂಡಳಿಯ ದಾಖಲಿಸಿದ ಅರ್ಜಿಯಲ್ಲಿ ಕೋರಿದ್ದ ಪರಿಹಾರವನ್ನೇ ಪುನರುಚ್ಚರಿಸಿ, ದಿನಾಂಕ:30-01-2023ರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸುವಂತೆ ಕೋರಿದ್ದರು. ಸದರಿ ಪ್ರಕರಣವು ದಿನಾಂಕ:20.12.2023 ರಂದು ವಿಚಾರಣೆಗೆ ಬಂದಾಗ ಮಾನ್ಯ ರಾಜ್ಯ ಉಚ್ಚನ್ಯಾಯಾಲಯದ ವಿಭಾಗೀಯ ಪೀಠವು ಅರ್ಜಿದಾರರಿಗೆ ಸಂಬಂಧಿಸಿದಂತೆ ಮಧ್ಯಂತರ ತಡೆಯಾಜ್ಞೆ ನೀಡಿದ್ದು, ಸದರಿ ಮಧ್ಯಂತರ ಆದೇಶವು ಪ್ರಕರಣದಲ್ಲಿನ ಅರ್ಜಿದಾರರುಗಳಿಗೆ ಸೀಮಿತವಾಗಿ ತಡೆಯಾಜ್ಞೆ ನೀಡಲಾಗಿದೆ ಎಂದು ಅಪರ ಸರ್ಕಾರಿ ವಕೀಲರು ದಿನಾಂಕ:22.12.2023 ರ ಪತ್ರದಲ್ಲಿ ತಿಳಿಸಿರುತ್ತಾರೆ.<br>ಮಾನ್ಯ ರಾಜ್ಯ ಉಚ್ಚನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:28614/2023 ರಲ್ಲಿ ನೀಡಿದ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಆಯ್ಕೆಯಿಂದ ವಂಚಿತರಾದ ಇತರೆ 05 ಅಭ್ಯರ್ಥಿ/ಅರ್ಜಿದಾರರುಗಳು ರಾಜ್ಯ ಉಚ್ಚನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:2034/2024ನ್ನು ದಿನಾಂಕ:16.01.2024 ರಂದು ದಾಖಲಿಸಿದ್ದು, ಸದರಿ ಪ್ರಕರಣವು ದಿನಾಂಕ: 22.01.2024 ರಂದು ವಿಚಾರಣೆಗೆ ಬಂದಾಗ ಈ ಕೆಳಕಂಡಂತೆ ಮಧ್ಯಂತರ ಆದೇಶ ನೀಡಿರುತ್ತದೆ.<br>"The operation and execution of the implementation of and all further consequential actions pursuant to the order dated 02.11.2023 passed by the Karnataka State Administrative Tribunal, Principal Bench, Bengaluru in Application No.1516/2023 (vide Annexure B) and final selection list dated 03.03.2023 for the posts of Assistant Professors (under Annexure A9 series), is hereby stayed."<br>ಪ್ರಸ್ತುತ ವಿವಿಧ ವಿಷಯಗಳಲ್ಲಿ ಆಯ್ಕೆಯಾದ 1208 ಅಭ್ಯರ್ಥಿಗಳ ದಾಖಲಾತಿಗಳ ನೈಜತೆ ಮತ್ತು ವಿವಿಧ ಪ್ರಾಧಿಕಾರಗಳ ವರದಿಗಳ ಪರಿಶೀಲನೆ ಪ್ರಕ್ರಿಯೆ ಜಾರಿಯಲ್ಲಿದ್ದು, ಈ ಮಧ್ಯೆ ಮಾನ್ಯ ರಾಜ್ಯ ಉಚ್ಚನ್ಯಾಯಾಲಯವು ದಿನಾಂಕ:22.01.2024 ರಂದು ನೀಡಿರುವ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ರಿಟ್ ಅರ್ಜಿ ಸಂಖ್ಯೆ:28614/2023 ಮತ್ತು ರಿಟ್ ಅರ್ಜಿ ಸಂಖ್ಯೆ:2034/2024 ರಲ್ಲಿ ದಿನಾಂಕ:20.12.2023 ಮತ್ತು 22.01.2024 ರಂದು ನೀಡಿರುವ ಮಧ್ಯಂತರ ಆದೇಶಗಳನ್ನು ತೆರವುಗೊಳಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ. |
| ಆ) | ಆಯ್ಕೆ ಪಟ್ಟಿ ಅಧಿಸೂಚನೆಯಾದ ನಂತರ ಎಲ್ಲಾ ಪರಿಶೀಲನಾ ಕಾರ್ಯ ಪೂರ್ಣಗೊಂಡ ಅಭ್ಯರ್ಥಿಗಳ ಒಟ್ಟು ಸಂಖ್ಯೆ ಎಷ್ಟು; | ಸಕ್ಷಮ ಪ್ರಾಧಿಕಾರಗಳಿಂದ ಒಟ್ಟು 765 ಅಭ್ಯರ್ಥಿಗಳ ದಾಖಲೆಗಳ ಪರಿಶೀಲನಾ ಕಾರ್ಯ ಪೂರ್ಣಗೊಂಡಿರುತ್ತದೆ. |
| ಇ) | ಕಳೆದ 3 ವರ್ಷಗಳಿಂದ ನೇಮಕಾತಿ ಆದೇಶಕ್ಕಾಗಿ | ಬಂದಿದೆ. |

| | | |
|---|---|---|
| | ಕಾಯುತ್ತಿರುವ ಅಭ್ಯರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಈ) | ಬಂದಿದ್ದಲ್ಲಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ಯಾವಾಗ ಹೊರಡಿಸಲಾಗುವುದು; | ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯಪತ್ರದಲ್ಲಿ (ವಿಶೇಷ ರಾಜ್ಯ ಪತ್ರಿಕೆ) ದಿನಾಂಕ:03-11-2023ರಂದು ಪ್ರಕಟಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಆಯ್ಕೆಯಾದ 1208 ಅಭ್ಯರ್ಥಿಗಳ ಶೈಕ್ಷಣಿಕ ಹಾಗೂ ನೇಮಕಾತಿ ನಿಯಮಗಳಂತೆ ನೈಜತೆ ಪ್ರಮಾಣಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆಯುವುದು ಬಾಕಿ ಇರುತ್ತದೆ. ಪ್ರಸ್ತುತ 'ಡಿ' ಮತ್ತು 'ಇ' ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವಂತಹ ಸಹಾಯಕ ಪ್ರಾಧ್ಯಾಪಕರುಗಳನ್ನು ಬೋಧಕರ ವರ್ಗಾವಣೆ ನಿಯಂತ್ರಣ ನಿಯಮಗಳು 2021 ರನ್ವಯ ವರ್ಗಾವಣೆಗೊಳಿಸಿ, ಹುದ್ದೆಗಳನ್ನು ಖಾಲಿಗೊಳಿಸಿದ ನಂತರ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಬೇಕಿರುತ್ತದೆ. ಸದರಿ ನೇಮಕಾತಿ ಕುರಿತಂತೆ ಮಾನ್ಯ ಕೆ.ಎ.ಟಿ. ನ್ಯಾಯಮಂಡಳಿ ಹಾಗೂ ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿ ದಾಖಲಾದ ಪ್ರಕರಣ/ಅರ್ಜಿಗಳಲ್ಲಿ ತಡೆಯಾಜ್ಞೆ ತೆರವಾದ ನಂತರ ಮತ್ತು ಅಂತಿಮ ತೀರ್ಪು ಬಂದ ನಂತರ ಹಾಗೂ ಪ್ರಸ್ತುತ ವಿಧಾನ ಪರಿಷತ್ತಿನ ಪದವೀಧರ ಕ್ಷೇತ್ರಕ್ಕೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ಮುಕ್ತಾಯಗೊಂಡ ನಂತರ ಹಾಗೂ ಲೋಕಸಭಾ ಚುನಾವಣಾ ನೀತಿ ಸಂಹಿತೆಯನ್ನು ಗಮನದಲ್ಲಿರಿಸಿಕೊಂಡು ಅಂತಿಮವಾಗಿ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ ಕ್ರಮವಹಿಸಲಾಗುವುದು. |
| ಉ) | ಲೋಕಸಭಾ ಚುನಾವಣೆಯ ನೀತಿ ಸಂಹಿತೆಯ ಕಾರಣ ನೀಡಿ ಮುಂದೂಡುವ ಆಲೋಚನೆ ಏನಾದರೂ ಸರ್ಕಾರಕ್ಕೆ ಇದೆಯೇ? | |

ಇಡಿ 55 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು